ವಿ.ಡಿ.ಭಟ್ ಕರಸುಳ್ಳಿ (ಶಿರಸಿ) ಮೊ: 9449360806

# ಅಮೃತ ವಿವಿಗೆ ಸ್ವಚ್ಛ ವಿವಿ ಪ್ರಶಸ್ತಿ

**ಬೆಂಗಳೂರು:** ಸ್ವಚ್ಛ ಮಹಾವಿದ್ಯಾಲಯ ಎಂಬ ಹೆಗ್ಗಳಿಕೆಗೆ ಅಮೃತ ವಿಶ್ವವಿದ್ಯಾಲಯ ಪಾತ್ರವಾಗಿದ್ದು, ಪ್ರಸಕ್ತ ಸಾಲಿನ ಸ್ವಚ್ಛ ತಾಂತ್ರಿಕ ವಿವಿಗಳ ಪಟ್ಟಿಯಲ್ಲಿ ಮೊದಲ ಸ್ಥಾನ ಪಡೆದಿದೆ. ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ ಪ್ರಸಕ್ತ ಸಾಲಿನ ಸ್ವಚ್ಛ ತಾಂತ್ರಿಕ ವಿವಿಗಳ ಪಟ್ಟಿ ಬಿಡುಗಡೆ ಮಾಡಿದ್ದು, ಪ್ರಥಮ ಸ್ಥಾನ ಪಡೆದಿದೆ. ಸ್ಪರ್ಧೆಯಲ್ಲಿ ದೇಶದ 3,500 ಕ್ಕೂ ಹೆಚ್ಚು ಉನ್ನತ ಶಿಕ್ಷಣ ಸಂಸ್ಥೆಗಳು ಸ್ಪರ್ಧಿಸಿದ್ದು, ಸ್ವಚ್ಛತೆ, ನೈರ್ಮಲ್ಯ, ತ್ಯಾಜ್ಯ ವಿಲೇವಾರಿಗೆ ಬಳಸಿಕೊಳ್ಳುತ್ತಿರುವ ತಾಂತ್ರಿಕತೆಗಳು, ಕ್ಯಾಂಪಸ್‌ನಲ್ಲಿ ಹಸಿರೀಕರಣ ಸೇರಿದಂತೆ ಹಲವು ಸೌಲಭ್ಯಗಳ ಮಾನದಂಡದ ಆಧಾರದ ಮೇಲೆ ವಿವಿಗಳಿಗೆ ರ್‍ಯಾಂಕಿಂಗ್ ನೀಡಲಾಗಿದೆ.